# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1134 |
| 2) | ಸದಸ್ಯರ ಹೆಸರು | ಡಾ|| ತೇಜಸ್ವಿನಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 22-12-2021 |
| 4) | ಉತ್ತರಿಸಬೇಕಾದ ಸಚಿವರು | ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರ ಜಮೀನುಗಳಲ್ಲಿ ಯಾವ ರೀತಿಯ ಮೀನು ಕೃಷಿ ಯೋಜನೆಗಳಿವೆ; | ರೈತರ ಜಮೀನಿನಲ್ಲಿ ಮೀನು ಕೃಷಿ ಕೈಗೊಳ್ಳಲು ಇಲಾಖೆಯಿಂದ ರೂಪಿಸಿರುವ ಯೋಜನೆಗಳ ವಿವರ **ಅನುಬಂಧ-1**ರಲ್ಲಿ ನೀಡಲಾಗಿದೆ. |
| ಆ) | ಮೀನು ಕೃಷಿ ಯೋಜನೆಗಳಿಗಾಗಿ ಯಾವ ಯಾವ ರೀತಿಯ ರಿಯಾಯಿತಿ ಪ್ರೋತ್ಸಾಹ ದಾಯಕ ಯೋಜನೆಗಳನ್ನು ಸರ್ಕಾರ ರೂಪಿಸಿದೆ; | ಮೀನು ಕೃಷಿ ಪ್ರೋತ್ಸಾಹಿಸಲು ಸರ್ಕಾರವು ರೂಪಿಸಿರುವ ಯೋಜನೆಗಳ ವಿವರ **ಅನುಬಂಧ-1**ರಲ್ಲಿ ನೀಡಲಾಗಿದೆ. |
| ಇ) | ಇಂತಹ ಯೋಜನೆಯ ಅನುಷ್ಠಾನ ಯಾವ ಯಾವ ಜಿಲ್ಲೆಗಳಲ್ಲಿ ಇವೆ; ಎಷ್ಟು ಪ್ರಮಾಣದ ಮೀನು ಉತ್ಪತಿಯಾಗುತ್ತಿವೆ; | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮೀನು ಕೃಷಿಯನ್ನು ಕೈಗೊಳ್ಳಲು ಪ್ರೋತ್ಸಾಹಿಸಲಾಗುತ್ತಿದೆ. 2020-21ನೇ ಸಾಲಿನ ರಾಜ್ಯದ ಜಿಲ್ಲೆಗಳ ಮೀನು ಉತ್ಪಾದನೆಯ ವಿವರಗಳನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |
| ಈ) | ಮೀನು ಆಹಾರದ ಗ್ರಾಹಕರ ಪ್ರಮಾಣವೆಷ್ಟಿದೆ; ಯಾವ ಯಾವ ರೀತಿಯ (ಸಮುದ್ರ-ಹೊಳೆ-ನದಿ) ಮೀನು ಉತ್ಪತಿಯಾಗುವುದು ಮತ್ತು ಎಲ್ಲೆಲ್ಲಿ; | ರಾಜ್ಯದ 2011 ರ ಜನಗಣತಿ ಪ್ರಕಾರ ರಾಜ್ಯದ ಒಟ್ಟು ಜನ ಸಂಖ್ಯೆ 610.95 ಲಕ್ಷಗಳು. ಅದರಲ್ಲಿ ಅಂದಾಜು ಒಟ್ಟು ಮೀನು ತಿನ್ನುವ ಜನಸಂಖ್ಯೆ: 397.12 ಲಕ್ಷ (65%) ಇರುತ್ತಾರೆ. ಕರಾವಳಿ ಹಾಗೂ ಒಳನಾಡಿನಲ್ಲಿ ಉತ್ಪಾದನೆ / ಹಿಡುವಳಿಯಾಗುತ್ತಿರುವ ಮೀನಿನ ಜಾತಿಗಳ ವಿವರ **ಅನುಬಂಧ-3**ರಲ್ಲಿ ನೀಡಲಾಗಿದೆ. |
| ಉ) | ಗ್ರಾಮೀಣ ಕೃಷಿ ಮೀನುಗಾರಿಕೆಯಲ್ಲಿ ತೊಡಗಿರುವ ಉದ್ಯೋಗ ಪಡೆದಿರುವ ಸಂಖ್ಯೆ ಎಷ್ಟು; ಇವರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆಯೇ? | ಕರ್ನಾಟಕ ರಾಜ್ಯದಲ್ಲಿ ಒಟ್ಟು 0.89ಲಕ್ಷ ಸಂಖ್ಯೆಯ ಗ್ರಾಮೀಣ ಮೀನುಗಾರರಿರುತ್ತಾರೆ. ಇವರುಗಳು ಮೀನು ಕೃಷಿ ಹಾಗೂ ಸಂಬಂಧಿತ ಚಟುವಟಿಕೆಗಳನ್ನು ಜೀವನೋಪಾಯವನ್ನಾಗಿಸಿಕೊಂಡಿರುತ್ತಾರೆ.<br><br>ಮೀನುಗಾರಿಕೆ ವಲಯಕ್ಕೆ ಸಂಬಂಧಿಸಿದಂತೆ ಎಲ್ಲಾ ವಿಷಯಗಳ ಕುರಿತು ತರಬೇತಿಗಳನ್ನು ಅವಶ್ಯಕತೆ ಅನುಗುಣವಾಗಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಗ್ರಾಮೀಣ ಮೀನುಗಾರರಿಗೆ ನೀಡಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-186 ಮೀಇಇ 2021

(ಎಸ್. ಅಂಗಾರ) [signature] 2021

ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಡಾ|| ತೇಜಸ್ವಿನಿ ಗೌಡ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1134 ರ

ಅನುಬಂಧ-01

**ಮೀನು ಕೃಷಿ ಪ್ರೋತ್ಸಾಹಿಸಲು ಹಾಗೂ ರೈತರ ಜಮೀನಿನಲ್ಲಿ ಮೀನು ಕೃಷಿ ಕೈಗೊಳ್ಳಲು ಇಲಾಖೆಯಿಂದ ರೂಪಿಸಿರುವ ಯೋಜನೆಗಳ ವಿವರ**

**1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

a. "ಮತ್ಸ್ಯ ಕೃಷಿ ಆಶಾ ಕಿರಣ" ಯೋಜನೆಯಡಿ ಕೆರೆಗಳಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸಲು ಹಾಗೂ ಮೀನು ಕೃಷಿಗೆ ಉತ್ತೇಜನ ನೀಡಲು, ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 2 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುತ್ತಿದೆ.

b. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

c. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

d. ಸಮಗ್ರ ಮೀನು ಕೃಷಿಗೆ ಕ್ಲಸ್ಟರ್ ಮಾದರಿಯಲ್ಲಿ ಆಯ್ದ 14 ಜಂಟಿ ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆಗೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಟಿಗೆ ಸಹಾಯಧನ ನೀಡಲಾಗುವುದು. ಕ್ಲಸ್ಟರ್ ಪ್ರದೇಶದಲ್ಲಿ ಕೃಷಿಗೆ ಅನುಪಯುಕ್ತವಾಗಿರುವ ಜೌಗು-ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಆದ್ಯತೆ ನೀಡಲಾಗುತ್ತಿದೆ.

e. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು.

**2. ನೀಲಿ ಕ್ರಾಂತಿ/ PMMSY – ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ (ಯೋಜನೆ)**

3. ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯ ಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು

ಸಹಾಯಧನವನ್ನು ನೀಡಲಾಗುತ್ತಿದೆ. ಕೊಳದಲ್ಲಿ ಮತ್ತು ಪಂಜರದಲ್ಲಿ ಮೀನು ಕೃಷಿಗೆ ಕೇಂದ್ರ ಸರ್ಕಾರವು ಘಟಕ ವೆಚ್ಚ ಕ್ರಮವಾಗಿ ರೂ. 11.00ಲಕ್ಷ ಮತ್ತು ರೂ. 3.00 ಲಕ್ಷ ಯೂನಿಟ್ ನೀಡಲಾಗುತ್ತದೆ.

**4. ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ**

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ಮೀನು ಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯ ಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗುತ್ತಿದೆ.

c. ಮೀನುಗಾರರ ಹಾಗೂ ಮೀನುಗಾರರ ದೋಣಿಗಳ ಸುರಕ್ಷತೆಯ ನಿಟ್ಟಿನಲ್ಲಿ ಮೀನುಗಾರಿಕೆ ದೋಣಿಗಳಿಗೆ ಇಸ್ರೋ ಅಧಿಕೃತಗೊಳಿಸಿರುವ ಡಿ.ಎ.ಟಿ. ಉಪಕರಣವನ್ನು ಶೇ.50 ರಷ್ಟು ಸಹಾಯಧನ ನೀಡಿ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಲಾಗುವುದು. ಈ ಉದ್ದೇಶಕ್ಕಾಗಿ 3 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

**5. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು**

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ.

**<u>ಜಿಲ್ಲಾ ಪಂಚಾಯತ್ ಯೋಜನೆಗಳು</u>**

**1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದೆ.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

3. **ಕೆರೆಗಳ ಅಭಿವೃದ್ಧಿ:**

ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/- ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚೋ ಆ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುತ್ತಿದೆ.

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಡಾ|| ತೇಜಸ್ವಿನಿ ಗೌಡ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1134ರ

**ಅನುಬಂಧ 02**

2020-21ನೇ ಸಾಲಿನಲ್ಲಿ ರಾಜ್ಯದ ಜಿಲ್ಲಾವಾರು ಮೀನು ಉತ್ಪಾದನೆ ವಿವರ

| ಜಿಲ್ಲೆ | ಒಳನಾಡು ಮೀನು ಉತ್ಪಾದನೆ (ಮೆಟ್ರಿಕ್ ಟನ್ ಗಳಲ್ಲಿ) | ಕರಾವಳಿ ಮೀನು ಉತ್ಪಾದನೆ (ಮೆಟ್ರಿಕ್ ಟನ್ ಗಳಲ್ಲಿ) |
|---|---|---|
| ಬಾಗಲಕೋಟೆ | 2138.23 | |
| ಬೆಂಗಳೂರು ನಗರ | 6061.71 | |
| ಬೆಂಗಳೂರು ಗ್ರಾಮೀಣ | 2914.1 | |
| ಬೆಳಗಾವಿ | 6693.21 | |
| ಬಳ್ಳಾರಿ | 14308.64 | |
| ಬೀದರ್ | 2434.43 | |
| ವಿಜಯಪುರ | 9736.44 | |
| ಚಾಮರಾಜನಗರ | 4899.76 | |
| ಚಿಕ್ಕಮಗಳೂರು | 4993.54 | |
| ಚಿತ್ರದುರ್ಗ | 11401.72 | |
| ದಕ್ಷಿಣ ಕನ್ನಡ | 3951.27 | 139714.04 |
| ದಾವಣಗೆರೆ | 8251.21 | |
| ದಾರವಾಡ | 4540.14 | |
| ಗದಗ | 960.23 | |
| ಕಲುಬುರಗಿ | 5919.77 | |
| ಹಾಸನ | 11549.91 | |
| ಹಾವೇರಿ | 6390.38 | |
| ಕೊಡಗು | 4043.6 | |
| ಕೋಲಾರ | 4811.27 | |
| ಕೊಪ್ಪಳ | 5492.81 | |
| ಮಂಡ್ಯ | 29266.26 | |
| ಮೈಸೂರು | 13510.37 | |
| ರಾಯಚೂರು | 13262.61 | |
| ಶಿವಮೊಗ್ಗ | 26451.1 | |
| ತುಮಕೂರು | 17718.83 | |
| ಉಡುಪಿ | 3678.6 | 104441.00 |
| ಉತ್ತರ ಕನ್ನಡ | 12333.65 | 102908.83 |
| ಚಿಕ್ಕಬಳ್ಳಾಪುರ | 4387.99 | |
| ರಾಮನಗರ | 5617.67 | |
| ಯಾದಗಿರಿ | 4161.29 | |
| ಒಟ್ಟು | **251880.74** | **347063.87** |

ಮಾನ್ಯ ವಿಧಾನ ಸಭೆ ಸದಸ್ಯರಾದ ಡಾ|| ತೇಜಸ್ವಿನಿ ಗೌಡ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ: 1134ರ

**ಅನುಬಂಧ 03**

**ಕರಾವಳಿ ಹಾಗೂ ಒಳನಾಡಿನಲ್ಲಿ ಉತ್ಪಾದನೆ/ಹಿಡುವಳಿಯಾಗುತ್ತಿರುವ ಮೀನಿನ ವಿವರ. ಈ ಕೆಳಕಂಡಂತಿರುತ್ತದೆ.**

| Sl. No. | Species |
|---|---|
| | **Fresh water Fishes** |
| | **Major Carps** |
| 1 | Catla-Catla |
| 2 | Labeo Rohita (Rohu) |
| 3 | Cirrhinus mrigala |
| 4 | Labeo Calbasu |
| | **Exotic Carps** |
| 5 | Common Carp |
| 6 | Silver Carp |
| 7 | Grass Crap |
| | **Minor Carps** |
| 8 | Labeo bata |
| 9 | Puntius sarana |
| 10 | Puntius gonionotus |
| 11 | Cirrhinus cirrhosa |
| 12 | Ompak species |
| 13 | Chitala chitala |
| 14 | Anabas testudineus |
| 15 | Murrels: Please Specify |
| | **Catfishes** |
| 16 | Wallago attu |
| 17 | pangasius |
| 18 | Mystus Species |
| 19 | Other fresh water fishes(Tilapia,Magur,Singhi,prawn, others) |
| | **Marine & Brakishwater Fishes** |
| | **ELASMOBRANCHS** |
| 1 | Sharks |
| 2 | Skates |
| 3 | Rays |
| 4 | Eals |
| 5 | Cat Fish |
| | **CLUPEIDS** |
| 6 | Wolf Herrings |
| 7 | Oil Sardine |
| 8 | Other Sardine |
| 9 | Hilsa Shad |
| 10 | Other Shads |
| 11 | Anchovies |
| 12 | Colia |
| 13 | Setipinna |
| 14 | Stolephorus(=Anchoviella) |

| | |
|---|---|
| 15 | Thryssa |
| 16 | Other Cluopeids |
| **Marine & Brakishwater Fishes** | |
| 17 | Lizardfishes |
| 18 | Bulls eye |
| 19 | Threadfin breams |
| | **PERCHES** |
| 20 | Groupers(Kalava) |
| 21 | Snapers |
| 22 | Pig face Breams |
| 23 | Silver grunt (Karkara) |
| 24 | Other Perches |
| 25 | Thredfins |
| 26 | Croakers |
| 27 | Silverbellies |
| | **FLATFISHES** |
| 28 | Halbut |
| 29 | Soles |
| 30 | Big jawed jumper |
| | **DRIFT FISHES** |
| 31 | Indian drift fish |
| 32 | Barracudas |
| | **POMFRETS** |
| 33 | Silver Pomfret |
| 34 | Black Pomfret |
| | **CARANGIDS** |
| 35 | Trevallies- Caranx |
| 36 | Horse Mackerel |
| 37 | Scads- Decapterids |
| 38 | Leather Jackets |
| 39 | King fish (Elacate) |
| 40 | Seriola |
| 41 | Other Carangids |
| 42 | Ribbon fishes |
| | **MACKERELS** |
| 43 | Indian Mackerel |
| 44 | Other Mackerel |
| | **SEERFISHES** |
| 45 | Indo-Pacific Spanish Mackerel |
| | **NERITIC TUNAS** |
| 46 | Little Tuna |
| 47 | Longtail Tuna (Kawa kawa) |
| | **OCEANIC TUNAS** |
| 48 | Sail fish |
| | **MARLINS** |
| 49 | Black marlin |

| | |
|---|---|
| 50 | Bombayduck |
| | **OTHER PELAGIC FISHES** |
| **Marine & Brakishwater Fishes** | |
| 51 | Flying fishes |
| 52 | Full beaks & Half beaks |
| | **MISC.FISHES** |
| 53 | Flat heads |
| 54 | Gerrids |
| 55 | Milk fish |
| 56 | Mullets |
| 57 | Sillagos |
| 58 | Tarpon |
| 59 | Terapon |
| 60 | Trigger fish (Balistids) |
| | **SHRIMPS** |
| 61 | Penaeid – Metapenaeus spp. |
| 62 | Penaeid-Parapenaeopsis spp. |
| 63 | Penaeid-Penaeus spp. |
| 64 | Non-penaeid shrimps |
| | **SHRIMPS(Deepsea)** |
| 65 | Penaeid-Metapenaeopsis spp. |
| | **OTH.CRUSTACEANS** |
| 66 | Crabs Chrybdis spp. |
| 67 | Crabs Neptunus spp. |
| 68 | Other Crabs |
| 69 | Stomatopods - Oratosquilla |
| | **CEPHALOPODS** |
| 70 | Cuttle Fish |
| 71 | Octopus |
| 72 | Squids |
| 73 | Queen fish |